# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1617
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 11.03.2022

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ನಗರ ಮತ್ತು ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಿಸುವಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳೇನು; | ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮಗಳಲ್ಲಿ ನಗರ/ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಣೆಯಲ್ಲಿ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸುತ್ತಿದೆ:<br><br>1. ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್‌ನ (ಆನ್‌ಲೈನ್) ಮೂಲಕ ಅರ್ಜಿ ಸಲ್ಲಿಸಿ, ಬಸ್‌ಪಾಸ್‌ಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>2. ವಿದ್ಯಾರ್ಥಿಯು ಕರ್ನಾಟಕ ಸರ್ಕಾರ / ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾನಿಲಯಗಳ ಪೂರ್ಣಾವಧಿ ಕೋರ್ಸ್‌ಗಳಲ್ಲಿ ಅಭ್ಯಸಿಸುತ್ತಿರಬೇಕು.<br><br>3. ವಿದ್ಯಾರ್ಥಿಗಳು ವಾಸಸ್ಥಳದಿಂದ ವಿದ್ಯಾಸಂಸ್ಥೆವರೆಗೆ ಪ್ರಯಾಣಿಸಲು, ಗರಿಷ್ಠ ಪ್ರಯಾಣ ಮಿತಿ 60ಕಿ.ಮೀವರೆಗೆ ಮಾತ್ರ ಬಸ್ ಪಾಸ್ ವಿತರಿಸಲಾಗುತ್ತಿದೆ.<br><br>4. 7ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಪಾಸು ವಿತರಿಸಲಾಗುತ್ತಿದೆ.<br><br>5. 2017-18ನೇ ಸಾಲಿನಿಂದ ಸರ್ಕಾರದ ಆದೇಶದನ್ವಯ ಎಲ್ಲಾ ತರಗತಿಗಳ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೂ ಸಹ ಉಚಿತ ಬಸ್ ಪಾಸ್ ವಿತರಣೆ ಮಾಡಲಾಗುತ್ತಿದೆ.<br><br>6. ಉಚಿತ ವಿದ್ಯಾರ್ಥಿ ಬಸ್ ಪಾಸ್‌ದಾರರು ನಿಗದಿತ ಸಂಸ್ಕರಣಾ ಶುಲ್ಕ ಮತ್ತು ಅಪಘಾತ ಪರಿಹಾರ ನಿಧಿ ಶುಲ್ಕವನ್ನು ಮಾತ್ರ (ಪ್ರಸ್ತುತ ರೂ.150/-) |



Generated from eOffice by B SREERAMULU, TD-MIN(BS), TRANSPORT MINISTER, Trans on 10/03/2022 08:44 PM

| | | |
|---|---|---|
| | | ಪಾವತಿಸಬೇಕಿರುತ್ತದೆ.<br><br>7. ರಿಯಾಯಿತಿ ಬಸ್‌ಪಾಸ್‌ದಾರರು ನಿಗದಿತ ಪಾಸಿನ ಶುಲ್ಕ, ಸಂಸ್ಕರಣಾ ಶುಲ್ಕ ಹಾಗೂ ಅಪಘಾತ ಪರಿಹಾರ ನಿಧಿ ಶುಲ್ಕವನ್ನು ಪಾವತಿಸಬೇಕಿರುತ್ತದೆ.<br><br>ನಿಗಮಗಳ ಬಸ್ಸುಗಳ ಆಚರಣೆ ಇರುವ ಮಾರ್ಗಗಳಲ್ಲಿ ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದೆ.<br><br>**ಬೆಂ.ಮ.ಸಾ.ಸಂಸ್ಥೆ:**<br><br>1. ವಿದ್ಯಾರ್ಥಿಯು ಶಿಕ್ಷಣ ಇಲಾಖೆಯ ನಿಯಂತ್ರಣದಲ್ಲಿರುವ ಶಾಲೆಗಳು, ವಿಶ್ವವಿದ್ಯಾನಿಲಯಗಳ ನಿಯಂತ್ರಣದಲ್ಲಿರುವ ಕಾಲೇಜುಗಳು, ಸರ್ಕಾರಿ/ ಸರ್ಕಾರದಿಂದ ಮಾನ್ಯತೆ ಪಡೆದು ನಡೆಸಲ್ಪಡುವ ಐಟಿಐ ಕಾಲೇಜುಗಳು, ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಮಾನ್ಯತೆ ಪಡೆದಿರುವ ಶಿಕ್ಷಣ ಸಂಸ್ಥೆಗಳು ಹಾಗೂ ಭಾರತ ಸರ್ಕಾರದಿಂದ ನಡೆಸಲ್ಪಡುವ ಶೈಕ್ಷಣಿಕ ಸಂಸ್ಥೆಗಳ ಪೂರ್ಣಾವಧಿ ಕೋರ್ಸುಗಳಲ್ಲಿ ಅಭ್ಯಸಿಸುತ್ತಿರಬೇಕು.<br>2. ವಿದ್ಯಾರ್ಥಿಗಳು ಗರಿಷ್ಠ ಪ್ರಯಾಣ ಮಿತಿ 60 ಕಿ.ಮೀ.ವರೆಗೆ ವಾಸಸ್ಥಳದಿಂದ ವಿದ್ಯಾಸಂಸ್ಥೆವರೆಗೆ ಪ್ರಯಾಣಿಸಲು ಬಸ್ ಪಾಸ್ ವಿತರಿಸಲಾಗುತ್ತಿದೆ.<br>3. ವಿದ್ಯಾರ್ಥಿಗಳು ಪಾಸಿಗಾಗಿ ಸೇವಾಸಿಂಧು ಪೋರ್ಟಲ್ ಮೂಲಕ ಅಥವಾ ಸಂಸ್ಥೆಯ ವೆಬ್‌ಸೈಟ್ www.mybmtc.karnataka.gov.in ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡಿ ಪ್ರಸ್ತುತ ಸಾಲಿನ ಶಾಲಾ/ ಕಾಲೇಜಿನ ಶುಲ್ಕ ರಸೀದಿ ಮತ್ತು ಭಾವಚಿತ್ರವನ್ನು ಅಪ್‌ಲೋಡ್ ಮಾಡಿ ಸಲ್ಲಿಸುವುದು.<br>4. ವಿದ್ಯಾರ್ಥಿಗಳು ಸಲ್ಲಿಸಿದ ಅರ್ಜಿಗಳನ್ನು (ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳನ್ನು ಹೊರತುಪಡಿಸಿ) ಶಾಲಾ/ಕಾಲೇಜು ನೋಡಲ್ |



Generated from eOffice by B SREERAMULU, TD-MIN(BS), TRANSPORT MINISTER, Trans on 10/03/2022 08:44 PM

| | | |
|---|---|---|
| | | ಅಧಿಕಾರಿಗಳು ಪರಿಶೀಲಿಸಿ ಆನ್‌ಲೈನ್ ಮೂಲಕವೇ ಅನುಮೋದನೆಯನ್ನು ನೀಡುವುದು. ಈ ರೀತಿ ಶಾಲಾ/ ಕಾಲೇಜಿನ ನೋಡಲ್ ಅಧಿಕಾರಿಗಳು ಅನುಮೋದಿಸಿದ ನಂತರ, ಸದರಿ ಅರ್ಜಿಯನ್ನು ಬೆಂ.ಮ.ಸಾ.ಸಂಸ್ಥೆಯಿಂದ ಪರಿಶೀಲಿಸಿ ಆನ್‌ಲೈನ್ ಮೂಲಕವೇ ಅನುಮೋದಿಸಲಾಗುವುದು.<br>5. ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳಿಗಾಗಿ ನಿಗದಿತ ಅರ್ಜಿಯನ್ನು ನೀಡಿದ್ದು, ಸದರಿ ಅರ್ಜಿಗಳನ್ನು ವಿದ್ಯಾರ್ಥಿಗಳು ಭರ್ತಿ ಮಾಡಿ, ಶಾಲೆಯ ಮುಖ್ಯಸ್ಥರಿಂದ ದೃಢೀಕರಿಸಿ, ನಂತರ ಸ್ಕ್ಯಾನ್ ಮಾಡಿ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡುವುದು. ಸದರಿ ವಿದ್ಯಾರ್ಥಿಗಳ ಅರ್ಜಿಯನ್ನು ಬೆಂ.ಮ.ಸಾ.ಸಂಸ್ಥೆಯಿಂದ ಪರಿಶೀಲಿಸಿ ಅನುಮೋದಿಸಲಾಗುವುದು.<br>6. ಈ ರೀತಿ ಅನುಮೋದನೆ ದೊರೆತ ನಂತರ ವಿದ್ಯಾರ್ಥಿಗಳು ಪಾಸ್ ಪಡೆಯುವ ಸ್ಥಳ, ದಿನಾಂಕ & ಸಮಯವನ್ನು ನಿಗಧಿಪಡಿಸಿಕೊಂಡು, ಅದರಂತೆ ಬೆಂಗಳೂರು ಒನ್ ಕೇಂದ್ರಗಳಲ್ಲಿ ಪಾಸಿನ ಮೊತ್ತ ಮತ್ತು ಸೇವಾ ಶುಲ್ಕವನ್ನು ಪಾವತಿಸಿ ವಿದ್ಯಾರ್ಥಿ ಪಾಸನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.<br>7. ಸಂಸ್ಥೆಯು ಕಾರ್ಯಾಚರಣೆ ಮಾಡುವ ಮಾರ್ಗಗಳಿಗೆ ಮಾತ್ರ ಬಸ್ ಪಾಸುಗಳನ್ನು ವಿತರಿಸಲಾಗುವುದು. |
| ಆ. | ವಿದ್ಯಾರ್ಥಿಗಳು ಬಸ್ ಪಾಸ್ ತೆಗೆದುಕೊಳ್ಳುವಲ್ಲಿ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯ ನಾಲ್ಕೂ ಸಾರಿಗೆ ನಿಗಮಗಳಲ್ಲಿ ವಿದ್ಯಾರ್ಥಿ ಬಸ್ ಪಾಸ್‌ಗಳನ್ನು 2019-20ನೇ ಸಾಲಿನಿಂದ ಸೇವಾಸಿಂಧು ಯೋಜನೆಯಡಿ ವಿತರಿಸಲಾಗುತ್ತಿದ್ದು, ಕೌಂಟರ್‌ಗಳಲ್ಲಿ ಪಾಸ್ ವಿತರಣೆ ಸಂಬಂಧ ಪ್ರಸಕ್ತ ಸಾಲಿನಲ್ಲಿ ಯಾವುದೇ ತೊಂದರೆಗಳಾಗುತ್ತಿರುವುದಿಲ್ಲ. |
| ಇ. | ಹಾಗಿದ್ದಲ್ಲಿ, ಇದನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | |
| | | |



Generated from eOffice by B SREERAMULU, TD-MIN(BS), TRANSPORT MINISTER, Trans on 10/03/2022 08:44 PM

| | | |
|---|---|---|
| ಈ. | ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ನೀಡಲು ಸರ್ಕಾರ ಚಿಂತಿಸಿದೆಯೇ; | ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ನೀಡುವ ಪ್ರಸ್ತಾವನೆ ಪರಿಶೀಲನೆಯಲ್ಲಿರುವುದಿಲ್ಲ. |
| ಉ. | ಯಾವ ಕಾಲಮಿತಿಯಲ್ಲಿ ಸದರಿ ಯೋಜನೆ ಜಾರಿಗೊಳಿಸಲಾಗುವುದು? | |

ಸಂಖ್ಯೆ: ಟಿಡಿ 77 ಟಿಸಿಕ್ಯೂ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು